ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಕೇಂದ್ರ ಸರ್ಕಾರದ ಸ್ವಚ್ಛ ಭಾರತ್ ಅಭಿಯಾನದ ಕುರಿತು

ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

452(522) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮೀಣ ಭಾಗಗಳಲ್ಲಿ ಸಾಂಕ್ರಾಮಿಕ ರೋಗ ಹರಡುವುದನ್ನು ತಡೆಹಿಡಿಯಲು ಹಾಗೂ ನಿರ್ಮಲ ವಾತಾವರಣ ನಿರ್ಮಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಬಚ್ಚಲುಗುಂಡಿ ನಿರ್ಮಾಣ ಯೋಜನೆಯು ರಾಜ್ಯದ ಒಟ್ಟು ಎಷ್ಟು ಕುಟುಂಬಗಳಿಗೆ ತಲುಪಿದೆ; ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು;

(ಆ) ಈ ಯೋಜನೆಗೆ ಸರ್ಕಾರ ನೀಡುವ ಸಹಾಯಧನ ಎಷ್ಟು; ಹಾಗೂ ಇಲ್ಲಿಯವರೆಗೆ ಸರ್ಕಾರ ಬಿಡುಗಡೆ ಮಾಡಿರುವ ಮೊತ್ತವೆಷ್ಟು;

(ಇ) ಕೇಂದ್ರ ಸರ್ಕಾರದ ಸ್ವಚ್ಛ ಭಾರತ್ ಅಭಿಯಾನದಡಿಯಲ್ಲಿ ಗ್ರಾಮೀಣ ಭಾಗದಲ್ಲಿ ಮನೆಗಳಿಗೆ ಶೌಚಾಲಯ ನಿರ್ಮಾಣ ಮಾಡಿಕೊಂಡಿರುವ ಕುಟುಂಬಗಳಿಗೂ ಈ ಯೋಜನೆ ಅನ್ವಯವಾಗುತ್ತದೆಯೇ? (ಸಂಪೂರ್ಣ ವಿವರ ನೀಡುವುದು)